**March 18, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

ಮುಖ್ಯಾಂಶಗಳು

- ಬೆಂಗಳೂರಿನಲ್ಲಿ ತೀವ್ರಗೊಂಡ ಕುಡಿಯುವ ನೀರಿನ ಸಮಸ್ಯೆ: ಮುಖ್ಯಮಂತ್ರಿ ನೇತೃತ್ವದಲ್ಲಿ ಇಂದು ಮಹತ್ವದ ಸಭೆ.
- ಮಾದರಿ ನೀತಿ ಸಂಹಿತೆ ನಿಬಂಧನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಚುನಾವಣಾ ಆಯೋಗ ನಿರ್ದೇಶನ.
- ಇಂದು ಶಿವಮೊಗ್ಗಕ್ಕೆ ಭೇಟಿ ನೀಡಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ: ಸಾರ್ವಜನಿಕ ಸಭೆಯಲ್ಲಿ ಭಾಗಿ.
- ಲೋಕಸಭಾ ಚುನಾವಣೆ ಹಿನ್ನೆಲೆ: ನಾಳೆ ಕಾಂಗ್ರೆಸ್ ಚುನಾವಣಾ ಸಮಿತಿ ಹಾಗೂ ಪಕ್ಷದ ಪ್ರಮುಖರ ಸಭೆ.
- ಈಗ ವಾರ್ತೆಗಳ ವಿವರ

*******

ರಾಜ್ಯದಲ್ಲಿ ಬರ ಪರಿಸ್ಥಿತಿ ಹೆಚ್ಚಾಗುತ್ತಿದ್ದು, ಬೆಂಗಳೂರಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಂಡಿದೆ. ಕಾವೇರಿ ಜಲಾನಯನ ಪ್ರದೇಶಗಳಲ್ಲಿನ ಅಣೆಕಟ್ಟೆಗಳಲ್ಲೂ ನೀರಿನ ಸಂಗ್ರಹದ ತೀವ್ರ ಕೊರತೆಯುಂಟಾಗಿದೆ.

ಬೆಂಗಳೂರಿನ ಹಲವು ಬಡಾವಣೆಗಳಿಗೆ ಜಲಮಂಡಳಿ ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಮಾಡುತ್ತಿದ್ದರೂ ಜನತೆಯ ದಾಹ ಇಂಗಿಸಲು ಸಾಧ್ಯವಾಗುತ್ತಿಲ್ಲ. ಈ ಸಂಬಂಧ ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಇಂದು ಮಹತ್ವದ ಸಭೆ ನಡೆಯಲಿದೆ.

ಮುಂದಿನ ದಿನಗಳಲ್ಲಿ ಬೇಸಿಗೆ ತೀವ್ರಗೊಳ್ಳುತ್ತಿದ್ದು, ನೀರಿನ ಸಮಸ್ಯೆ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಬಗ್ಗೆ ಮುಖ್ಯಮಂತ್ರಿ ಸಭೆಯಲ್ಲಿ ಚರ್ಚಿಸಲಿದ್ದಾರೆ.

*******

ಲೋಕಸಭಾ ಚುನಾವಣೆ ಮತ್ತು ನಾಲ್ಕು ರಾಜ್ಯಗಳ ವಿಧಾನಸಭಾ ಚುನಾವಣೆಗೆ ದಿನಾಂಕ ಘೋಷಣೆಯಾದ ನಂತರ, ಮಾದರಿ ನೀತಿ ಸಂಹಿತೆಯ ನಿಬಂಧನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಚುನಾವಣಾ ಆಯೋಗ ನಿರ್ದೇಶನಗಳನ್ನು ನೀಡಿದೆ.

ಸಂಪುಟ ಕಾರ್ಯದರ್ಶಿ, ಎಲ್ಲಾ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳು ಮತ್ತು ಮುಖ್ಯ ಚುನಾವಣಾ ಅಧಿಕಾರಿಗಳಿಗೆ ಬರೆದ ಪತ್ರದಲ್ಲಿ, ಚುನಾವಣಾ ಘೋಷಣೆಯಾದ 24 ಗಂಟೆಗಳ ಒಳಗೆ ಎಲ್ಲಾ ಗೋಡೆ ಬರಹಗಳು, ಪೋಸ್ಟರ್ ಗಳು, ಕಾಗದಗಳು ಅಥವಾ ಇತರ ಯಾವುದೇ ರೂಪದಲ್ಲಿ ವಿರೂಪಗೊಳಿಸುವುದನ್ನು ತೆಗೆದುಹಾಕಬೇಕು ಎಂದು ಸೂಚಿಸಿದೆ.

ಸರ್ಕಾರದ ಸಾಧನೆಗಳನ್ನು ಬಿಂಬಿಸುವ ಯಾವುದೇ ಜಾಹೀರಾತುಗಳನ್ನು ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮಗಳಲ್ಲಿ ಪ್ರಕಟಿಸಬಾರದು ಎಂದು ಆಯೋಗ ಪತ್ರದಲ್ಲಿ ತಿಳಿಸಿದೆ.

*******

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಶಿವಮೊಗ್ಗಕ್ಕೆ ಭೇಟಿ ನೀಡಲಿದ್ದಾರೆ. ಶಿವಮೊಗ್ಗದ ಅಲ್ಲಮ ಪ್ರಭು ಮೈದಾನದಲ್ಲಿ ಪ್ರಧಾನಮಂತ್ರಿ ಬೃಹತ್ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಭಾ ಣ ಮಾಡಲಿದ್ದಾರೆ.

ಲೋಕಸಭಾ ಚುನಾವಣೆ ದಿನಾಂಕ ಘೋ ಣೆಯಾದ ಬಳಿಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ರಾಜ್ಯದಲ್ಲಿ ಭಾಗವಹಿಸಲಿರುವ ಮೊದಲ ಚುನಾವಣಾ ಪ್ರಚಾರ ಸಭೆ ಇದಾಗಿದೆ.

*******

ಲೋಕಸಭಾ ಚುನಾವಣಾ ವೇಳಾಪಟ್ಟಿ ಪ್ರಕಟವಾಗಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್‌ನಲ್ಲೂ ಸಿದ್ಧತೆಗಳು ತೀವ್ರಗೊಂಡಿವೆ.

ಅಭ್ಯರ್ಥಿಗಳ 2 ನೇ ಪಟ್ಟಿ ಬಿಡುಗಡೆಗೆ ಸಿದ್ಧತೆ ನಡೆಸಲಾಗಿದ್ದು, ಈ ಸಂಬಂಧ ಇದೇ 19 ರಂದು ಅಂದರೆ ನಾಳೆ ಕಾಂಗ್ರೆಸ್ ಚುನಾವಣಾ ಸಮಿತಿ ಹಾಗೂ ಪಕ್ಷದ ಮುಖಂಡರ, ಪ್ರಮುಖರ ಸಭೆ ನಡೆಸಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಉದ್ದೇಶಿಸಿದ್ದಾರೆ.

ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪಾಲ್ಗೊಳ್ಳಲಿದ್ದಾರೆ. ಸಭೆಯ ಬಳಿಕ ಕರ್ನಾಟಕದ ಬಾಕಿ ಉಳಿದಿರುವ 21 ಕ್ಷೇತ್ರಗಳ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡುವ ಸಾಧ್ಯತೆಗಳಿವೆ. ರಾಜ್ಯದ 7 ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಈಗಾಗಲೇ ಕಾಂಗ್ರೆಸ್ ಬಿಡುಗಡೆ ಮಾಡಿದೆ.

*******

ಲೋಕಸಭಾ ಚುನಾವಣೆಯಲ್ಲಿ ಸಾರ್ವಜನಿಕರ ಸಕ್ರಿಯೆ ಭಾಗವಹಿಸುವಿಕೆ ಹಾಗೂ ಮತದಾರರಲ್ಲಿ ಜಾಗೃತಿ ಮೂಡಿಸಲು ಬಿಬಿಎಂಪಿ ಸಹಯೋಗದಲ್ಲಿ ಬೆಂಗಳೂರಿನಲ್ಲಿ ನಿನ್ನೆ ವಿಶೇ ' ವಾಕ್ ಥಾನ್ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಬಿಬಿಎಂಪಿ ಚುನಾವಣೆಗಳ ವಿಶೇ ' ಆಯುಕ್ತ ಡಾ.ಕೆ..ಸೆಲ್ವಮಣಿ, ಖಾಸಗಿ ಆಸ್ಪತ್ರೆಯ ಕಾರ್ಯನಿರ್ವಾಹಕ ನಿರ್ದೇಶಕ ಡಾ.ಎಸ್.ವಿಜಯಭಾಸ್ಕರನ್, ಚಿತ್ರನಟಿ ಪ್ರಣಿತಾ ಸುಭಾ ್ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗಿಯಾಗಿದ್ದರು.

*******

ಉತ್ತರಕನ್ನಡ ಜಿಲ್ಲೆಯಲ್ಲಿ ಮುಕ್ತ, ಪಾರದರ್ಶಕ ಮತ್ತು ಶಾಂತಿಯುತ ಚುನಾವಣೆ ನಡೆಸಲು ಎಲ್ಲಾ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಹೇಳಿದ್ದಾರೆ.

ಕಾರವಾರದಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉತ್ತರ ಕನ್ನಡ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಿತ್ತೂರು, ಖಾನಾಪುರ, ಹಳಿಯಾಳ, ಕಾರವಾರ, ಕುಮಟಾ, ಭಟ್ಕಳ, ಶಿರಸಿ, ಯಲ್ಲಾಪುರ ವಿಧಾನಸಭಾ ಕ್ಷೇತ್ರ ಸೇರಿ 8 ವಿಧಾನಸಭಾ ಕ್ಷೇತ್ರಗಳು ಬರಲಿದ್ದು, ಒಟ್ಟು 1977 ಮತಗಟ್ಟೆಗಳನ್ನು ತೆರೆಯಲಾಗುವುದು ಎಂದರು.

ಜಿಲ್ಲೆಯಲ್ಲಿ ಚುನಾವಣಾ ಅಕ್ರಮಗಳನ್ನು ತಡೆಗಟ್ಟಲು ಒಟ್ಟು 25 ಚೆಕ್‌ಪೋಸ್ಟ್ ಗಳನ್ನು ತರೆಯಲಾಗಿದ್ದು, ಇಂದಿನಿಂದಲೇ ಎಲ್ಲಾ ಚೆಕ್‌ಪೋಸ್ಟ್‌ಗಳು ಕಾರ್ಯಾರಂಭ ಮಾಡಿವೆ ಎಂದು ಅವರು ಹೇಳಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆ 2 ನೇ ಹಂತದಲ್ಲಿ ನಡೆಯಲಿದ್ದು, ತಕ್ಷಣದಿಂದಲೇ ಮಾದರಿ ಚುನಾವಣೆ ನೀತಿ ಸಂಹಿತೆ ಜಾರಿಗೊಳಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದ್ದಾರೆ.

ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆಗೆ ಜಿಲ್ಲೆಯಲ್ಲಿ ಸಕಲ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದೆ. ಚುನಾವಣಾ ಅಕ್ರಮ ತಡೆಗಾಗಿ ಜಿಲ್ಲೆಯಲ್ಲಿ 35 ಚೆಕ್‌ಪೋಸ್ಟ್ ಹಾಗೂ ಶಿರಾ ಹಾಗೂ

ಪಾವಗಡದಲ್ಲಿ ತಲಾ 6 ಚೆಕ್‌ಪೋಸ್ಟ್ ಸ್ಥಾಪನೆ ಸೇರಿದಂತೆ ಒಟ್ಟು 47 ಚೆಕ್‌ಪೋಸ್ಟಗಳು ಕಾರ್ಯನಿರ್ವಹಿಸಲಿವೆ. ಜಿಲ್ಲೆ ಹೊರರಾಜ್ಯದೊಂದಿಗೆ ಗಡಿ ಪ್ರದೇಶ ಹೊಂದಿರುವುದರಿಂದ ಸತ್ಯಸಾಯಿ ಹಾಗೂ ಅನಂತಪುರ ಗಡಿಭಾಗದಲ್ಲಿ ಅಂತರ ರಾಜ್ಯ ಚೆಕ್‌ಪೋಸ್ಟಗಳನ್ನು ಸ್ಥಾಪಿಸಲಾಗಿದೆ ಎಂದು ಅವರು ಹೇಳಿದರು.

*******

ಹಾವೇರಿ ಜಿಲ್ಲೆಯ 5 ವಿಧಾನಸಭಾ ಕ್ಷೇತ್ರ ಹಾಗೂ ಗದಗ ಜಿಲ್ಲೆಯ 3 ವಿಧಾನಸಭಾ ಕ್ಷೇತ್ರ ಒಳಗೊಂಡ ಹಾವೇರಿ–ಗದಗ ಲೋಕಸಭಾ ಚುನಾವಣೆಯನ್ನು ಪಾರದರ್ಶಕ ಹಾಗೂ ನ್ಯಾಯಸಮ್ಮತವಾಗಿ ನಡೆಸಲು ಎಲ್ಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಹಾವೇರಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ಹೇಳಿದ್ದಾರೆ.

ಹಾವೇರಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾವೇರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 17 ಲಕ್ಷ 77 ಸಾವಿರದ 877 ಮತದಾರಿದ್ದು, ಈ ಪೈಕಿ 85 ವರ್ಷ ಮೇಲ್ಪಟ್ಟ 15 ಸಾವಿರದ 521 ಮತದಾರರು, 27 ಸಾವಿರದ 434 ವಿಶೇಷ ಚೇತನ ಮತದಾರರು, 1 ಸಾವಿರದ 607 ಸೇವಾ ಮತದಾರರು ಹಾಗೂ 50 ಸಾವಿರದ 658 ಮತದಾರರು 18 ರಿಂದ 19 ವರ್ಷ ವಯೋಮಾನದವರಿದ್ದಾರೆ ಎಂದು ಮಾಹಿತಿ ನೀಡಿದರು.

*******

ಕಲಬುರ್ಗಿ ಮತ್ತು ರಾಯಚೂರು ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಯಾದಗಿರಿ ಜಿಲ್ಲೆಯ ನಾಲ್ಕು ವಿಧಾನಸಭೆ ಕ್ಷೇತ್ರಗಳಲ್ಲಿ ಸಾರ್ವತ್ರಿಕ ಚುನಾವಣೆ ಹಾಗೂ ಸುರಪುರ ವಿಧಾನಸಭೆ ಕ್ಷೇತ್ರಕ್ಕೆ ಉಪಚುನಾವಣೆ ನಡೆಸಲು ಸಕಲ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ.

ಯಾದಗಿರಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೇ 7ರಂದು ರಾಯಚೂರು ಲೋಕಸಭೆ ವ್ಯಾಪ್ತಿಯ ಒಟ್ಟು 1,134 ಮತಗಟ್ಟೆಗಳಲ್ಲಿ ಮತದಾನ ನಡೆಯಲಿದ್ದು, ಜೂನ್ 4 ರಂದು ಮತಗಳ ಎಣಿಕೆ ನಡೆಯಲಿದೆ ಎಂದರು.

ಇನ್ನು, ಲೋಕಸಭೆ ಚುನಾವಣೆಯ ಜೊತೆಗೆ ಸುರಪುರ ಮತಕ್ಷೇತ್ರದ ಶಾಸಕರಾಗಿದ್ದ ರಾಜಾ ವೆಂಕಟಪ್ಪ ನಾಯಕ್ ನಿಧನರಾಗಿದ್ದರಿಂದ ತೆರವಾಗಿರುವ ಸ್ಥಾನಕ್ಕೆ ಉಪ ಚುನಾವಣೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

*******

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಒಟ್ಟು 8 ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದ್ದು, ಕ್ಷೇತ್ರದ ವ್ಯಾಪ್ತಿಯಲ್ಲಿ 19 ಲಕ್ಷದ 66 ಸಾವಿರದ 67 ಮತದಾರರಿದ್ದಾರೆ ಎಂದು ಕ್ಷೇತ್ರದ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

ಲೋಕಸಭಾ ಕ್ಷೇತ್ರದ ಚುನಾವಣೆಯ ಸಿದ್ದತೆಗಳ ಕುರಿತು ಮಾಹಿತಿ ನೀಡಿರುವ ಅವರು, ಕ್ಷೇತ್ರದಲ್ಲಿ ಒಟ್ಟು 19 ಲಕ್ಷದ 66 ಸಾವಿರದ 67 ಮತದಾರರಿದ್ದು, ಈ ಪೈಕಿ 9 ಲಕ್ಷದ 76 ಸಾವಿರದ 436 ಪುರು ' ಮತದಾರರು ಮತ್ತು 9 ಲಕ್ಷದ 89 ಸಾವಿರದ 369 ಮಹಿಳಾ ಮತದಾರರು ಹಾಗೂ 262 ಇತರೆ ಮತದಾರರಿದ್ದಾರೆ ಎಂದರು.

ಮಾರ್ಚ್ 25 ರವರೆಗೂ ಮತದಾರರ ಪಟ್ಟಿಯಲ್ಲಿ ಹೊಸದಾಗಿ ನೊಂದಾಯಿಸಿಕೊಳ್ಳಲು ಅವಕಾಶವಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

*******

ವಿಜಯಪುರ ಲೋಕಸಭಾ ಕ್ಷೇತ್ರದಲ್ಲಿ ಎರಡನೇ ಹಂತದಲ್ಲಿ ಚುನಾವಣೆ ನಡೆಯಲಿದ್ದು, ಸುಸೂತ್ರವಾಗಿ ಚುನಾವಣೆ ನಡೆಸಲು. 9 ಜನ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಟಿ. ಭೂಬಾಲನ್ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಒಟ್ಟು 2 ಸಾವಿರದ 85 ಮತಗಟ್ಟೆಗಳಿದ್ದು, 19 ಲಕ್ಷದ 19 ಸಾವಿರದ 48 ಮತದಾರರು ಇದ್ದಾರೆ. ಇದರಲ್ಲಿ 9 ಲಕ್ಷದ 42 ಸಾವಿರದ 757 ಮಹಿಳಾ, 9 ಲಕ್ಷದ 42 ಸಾವಿರದ 757 ಪುರುಷರು, 218 ಇತರೆ ಮತದಾರರಿದ್ದಾರೆ. ಎಂದರು.

ಜಿಲ್ಲೆಯಲ್ಲಿ ಒಟ್ಟು 27 ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದ್ದು, ಅವುಗಳಲ್ಲಿ 11 ಅಂತರರಾಜ್ಯ ಚೆಕ್‌ಪೋಸ್ಟ್, 16 ಅಂತರ ಜಿಲ್ಲಾ ಚೆಕ್‌ಪೋಸ್ಟ್ ಸ್ಥಾಪಿಸಲಾಗಿದೆ. ಜಿಲ್ಲಾ ಹಂತದಲ್ಲಿ ಹಾಗೂ ವಿಧಾನಸಭಾ ಮತಕ್ಷೇತರವಾರು ದೂರು ನಿರ್ವಹಣಾ ಕೋಶವನ್ನು ಸ್ಥಾಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

*******

ಮಾರ್ಚ್ 25 ರಿಂದ ಏಪ್ರಿಲ್ 6 ವರೆಗೆ ಜಿಲ್ಲೆಯ 51 ಕೇಂದ್ರಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ನಡೆಯಲಿದ್ದು, ಪರೀಕ್ಷೆಯನ್ನು ಶಿಸ್ತು ಹಾಗೂ ಸಮನ್ವಯದೊಂದಿಗೆ ಯಾವುದೇ ಗೊಂದಲಕ್ಕೆ ಆಸ್ಪದ ನೀಡದೆ ನಡೆಸಬೇಕು ಎಂದು ಉಡುಪಿ ಅಪರ ಜಿಲ್ಲಾಧಿಕಾರಿ ಮಮತಾ ಜಿ.ಎಸ್ ಸೂಚನೆ ನೀಡಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಬೆಂಗಳೂರಿನಲ್ಲಿ ತೀವ್ರಗೊಂಡ ಕುಡಿಯುವ ನೀರಿನ ಸಮಸ್ಯೆ: ಮುಖ್ಯಮಂತ್ರಿ ನೇತೃತ್ವದಲ್ಲಿ ಇಂದು ಮಹತ್ವದ ಸಭೆ.

ಮಾದರಿ ನೀತಿ ಸಂಹಿತೆ ನಿಬಂಧನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಚುನಾವಣಾ ಆಯೋಗ ನಿರ್ದೇಶನ.

ಇಂದು ಶಿವಮೊಗ್ಗಕ್ಕೆ ಭೇಟಿ ನೀಡಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ: ಸಾರ್ವಜನಿಕ ಸಭೆಯಲ್ಲಿ ಭಾಗಿ.

ಲೋಕಸಭಾ ಚುನಾವಣೆ ಹಿನ್ನೆಲೆ: ಇದೇ 19 ರಂದು ಕಾಂಗ್ರೆಸ್ ಚುನಾವಣಾ ಸಮಿತಿ ಹಾಗೂ ಪಕ್ಷದ ಪ್ರಮುಖರ ಸಭೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ 7 ಗಂಟೆ 35 ನಿಮಿಷಕ್ಕೆ

******